**ಕರ್ನಾಟಕ ಸರ್ಕಾರ**

ಸಂಖ್ಯೆ: ಇಪಿ 211 ಎಸ್‌ಎಲ್‌ಬಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:15.10.2025

**ಅಧಿಸೂಚನೆ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಕಾಯ್ದೆ, 1966 (1966ರ ಕರ್ನಾಟಕ ಅಧಿನಿಯಮ ಸಂಖ್ಯೆ 16) ಸೆಕ್ಷನ್ 26 ಮತ್ತು ಸೆಕ್ಷನ್ 27 ರ ಮೂಲಕ ಪದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯು, ಕರ್ನಾಟಕ ಸರ್ಕಾರದ ಅನುಮೋದನೆ ಮೇರೆಗೆ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಮೊದಲ ನಿಯಮಾವಳಿಗಳು, 1966ಗೆ ಕರ್ನಾಟಕ ಸರ್ಕಾರವು ಪ್ರಸ್ತಾಪಿಸಿರುವ ಅಧಿಸೂಚನೆ ಸಂಖ್ಯೆ:ಇಪಿ 211 ಎಸ್‌ಎಲ್‌ಬಿ 2025, ದಿನಾಂಕ:24.07.2025 ರಲ್ಲಿ ಪ್ರಕಟಿಸಿರುವ ಕರಡು ಅಧಿಸೂಚನೆಯನ್ನು ಕರ್ನಾಟಕ ರಾಜ್ಯಪತ್ರದ ಭಾಗ 4 (ಎ) ರಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಇದರಿಂದ ಬಾಧಿತರಾಗುವ, ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲು, ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ.

ದಿನಾಂಕ:24.07.2025 ರಲ್ಲಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿರುವ ಸದರಿ ಕರಡು ನಿಯಮಗಳಿಗೆ ಸಾರ್ವಜನಿಕರಿಂದ ಆಕ್ಷೇಪಣೆ / ಸಲಹೆಗಳು ಸರ್ಕಾರದಲ್ಲಿ ಸ್ವೀಕೃತವಾಗಿರುತ್ತವೆ.

ಈಗ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಕಾಯ್ದೆ, 1966 (1966ರ ಕರ್ನಾಟಕ ಅಧಿನಿಯಮ ಸಂಖ್ಯೆ 16) ಸೆಕ್ಷನ್ 26 ಮತ್ತು ಸೆಕ್ಷನ್ 27 ರ ಮೂಲಕ ಪದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸಿರುತ್ತದೆ. ಎಂದರೆ:-

**ನಿಯಮಗಳು**

1. **ಶೀರ್ಷಿಕೆ ಮತ್ತು ಪ್ರಾರಂಭ**. ಈ ನಿಯಮಗಳನ್ನು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಮೊದಲ ನಿಯಮಗಳು (ತಿದ್ದುಪಡಿ) 2025 ಎಂದು ಕರೆಯತಕ್ಕದ್ದು.

2. **ಅನುಬಂಧ III ರ ತಿದ್ದುಪಡಿ**. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಮೊದಲ ನಿಯಮಾವಳಿಗಳು, 1966, ಅನುಬಂಧ III ರಲ್ಲಿ,-

   (i) ನಿಯಮ 16 ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳಿಗೆ, ಈ ಕೆಳಗಿನಂತೆ ಪ್ರತಿಯೋಜಿಸತಕ್ಕದ್ದು,

"16. ಅಭ್ಯರ್ಥಿಗಳು ಆಂತರಿಕ ಮೌಲ್ಯಮಾಪನ ಮತ್ತು ಬಾಹ್ಯ ಪರೀಕ್ಷೆ ಎರಡೂ ಸೇರಿ ಒಟ್ಟಾರೆ 33% ಅಂಕಗಳನ್ನು ಪಡೆದು, ಒಟ್ಟು 625 ಅಂಕಗಳಿಗೆ ಕನಿಷ್ಠ 206 ಅಂಕಗಳನ್ನು ಗಳಿಸಿದಲ್ಲಿ ಮತ್ತು ಆಯಾ ವಿಷಯದ ಒಟ್ಟು ಅಂಕಗಳಲ್ಲಿ ಕನಿಷ್ಠ 30% ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಯನ್ನು ಉತ್ತೀರ್ಣರೆಂದು ಘೋಷಿಸಲಾಗುತ್ತದೆ.";

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/10/25

**(ಎಸ್. ಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

GOVERNMENT OF KARNATAKA

No: EP 211 SLB 2025

Karnataka Government Secretariat,
M.S. Building,
Bangalore, dated:15.10.2025

## NOTIFICATION

In exercise of the powers conferred by section 26 read with section 27 of the Karnataka School Examination and Assessment Board Act, 1966 (Karnataka Act No. 16 of 1966), the Karnataka School Examination and Assessment Board with approval of the State Government hereby makes the following draft amendments to the Karnataka Secondary Education and Examination Board First Regulations, 1966, was Published as in Notification No. EP 211 SLB 2025, dated:24.07.2025 in part of IVA of the Karnataka Gazette dated:24.07.2025 inviting objections and suggestions from all persons likely to be affected thereby within fifteen days from the date of its publications in the Official Gazette.

And whereas the said Gazette was made available to public on 24.07.2025 and whereas objections and suggetions have been received by the Government.

Now, therefore, in exercise of the powers conferred by sections 26 read with section 27 of the Karnataka School Examination and Assessment Board Act, 1966 (Karnataka Act No. 16 of 1966) the Government of Karnataka hereby make the following rules, namely:-

## RULES

1. **Title and commencement**. These regulations may be called the Karnataka Secondary Education Examination Board First Regulations (Amendment) 2025.

2. **Amendment of Annexure III**. In the Karnataka Secondary Education Examination Board First Regulations, 1966, in Annexure III,-

(i) For Rule 16 and the entries relating thereto, the following shall be substituted, namely:-

"16. Candidates shall secure an aggregate of 33% marks in internal assessment and external examination combined and shall be declared pass if they secure at least 206 marks out of a total of 625 marks, including at least 30% marks in each subject out of the total marks of the respective subject.";

By order and in the name of
Governor of Karnataka,

15/10/25

(S. PRAKASHA)
Under Secretary to Government
(Secondary)
Department of School Education and Literacy